National
Kannada
02.05.2025: 13.10hrs
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**

**ಮುಖ್ಯಾಂಶಗಳು:**

**1.** ಪ್ರಧಾನಿ ನರೇಂದ್ರ ಮೋದಿ ಅವರಿಂದ ದೇಶದ ಮೊದಲ ಅರೆ ಸ್ವಯಂಚಾಲಿತ ಬಂದರಿಗೆ ಕೇರಳದ ವಿಳಿಂಜಂನಲ್ಲಿ ಚಾಲನೆ

**2.** ಆಂಧ್ರಪ್ರದೇಶಕ್ಕೆ ಸಂಜೆ ಪ್ರಧಾನಿ ಭೇಟಿ ; ಅಮರಾವತಿಯಲ್ಲಿ ೫೮ ಸಾವಿರ ಕೋಟಿ ಮೊತ್ತದ ಅಭಿವೃದ್ಧಿ ಯೋಜನೆಗಳ ಶಂಕುಸ್ಥಾಪನೆ, ಲೋಕಾರ್ಪಣೆ

**3.** ವೇವ್ಸ್ ಶೃಂಗಸಭೆ ; ಜಾಗತಿಕ ಮಾಧ್ಯಮ ಸಂವಾದ ಆರಂಭ

**4.** ರುದ್ರಪ್ರಯಾಗದ ಕೇದಾರನಾಥ ದೇವಾಲಯದ ದರ್ಶನಕ್ಕೆ ಇಂದಿನಿಂದ ಭಕ್ತರಿಗೆ ಅವಕಾಶ

**5.** ಐಪಿಎಲ್ ಟಿ-೨೦ ಕ್ರಿಕೆಟ್ : ಇಂದು ಗುಜರಾತ್ ಟೈಟನ್ಸ್-ಸನ್‌ರೈಸರ್ಸ್ ಹೈದರಾಬಾದ್ ಮುಖಾಮುಖಿ

*********

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಕೇರಳದ ತಿರುವನಂತಪುರದಲ್ಲಿ ಭಾರತದ ಮೊದಲ ಅರೆ ಸ್ವಯಂಚಾಲಿತ ಆಳಸಾಗರದ ವಿಳಿಂಜಂ ಅಂತಾರಾಷ್ಟ್ರೀಯ ಬಂದರನ್ನು ರಾಷ್ಟ್ರಕ್ಕೆ ಸಮರ್ಪಿಸಿದರು. ೮ ಸಾವಿರದ ೯೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಈ ಬಂದರನ್ನು ಅಭಿವೃದ್ಧಿಪಡಿಸಲಾಗಿದೆ. ನಂತರ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಒಂದೆಡೆ ವಿಶಾಲವಾಗಿ ಸಮುದ್ರದೊಂದಿಗೆ ವಿಫುಲ ಅವಕಾಶಗಳಿವೆ. ಮತ್ತೊಂದೆಡೆ ನಿಸರ್ಗದ ಸೌಂದರ್ಯವಿದೆ. ಅದರ ನಡುವಿನ ಈ ಬಹು ಉದ್ದೇಶದ ಬಂದರು ಅಭಿವೃದ್ಧಿಯ ನವಯುಗದ ಸಂಕೇತವಾಗಿದೆ ಎಂದರು.

ಧ್ವನಿ : ಪ್ರಧಾನಿ ನರೇಂದ್ರ ಮೋದಿ (೨೮ ಸೆಕೆಂಡ್‌ಗಳು)

ಸಮಾರಂಭದಲ್ಲಿ ಕೇರಳ ರಾಜ್ಯಪಾಲ ರಾಜೇಂದ್ರ ಅರ್ಲೇಕರ್, ಮುಖ್ಯಮಂತ್ರಿ ಪಿಣರಾಯಿ ವಿಜಯನ್, ಕೇಂದ್ರ ಬಂದರು, ಹಡಗು ಮತ್ತು ಜಲಮಾರ್ಗಗಳ ಸಚಿವ ಸರ್ಬಾನಂದ ಸೋನೋವಾಲ್, ರಾಜ್ಯ ಖಾತೆ ಸಚಿವರು ಮತ್ತು ಇತರ ಉನ್ನತ ಅಧಿಕಾರಿಗಳು ಭಾಗವಹಿಸಿದರು.

*********

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಸಂಜೆ ಆಂಧ್ರಪ್ರದೇಶದ ಅಮರಾವತಿಯಲ್ಲಿ ಸುಮಾರು ೫೮ ಸಾವಿರ ಕೋಟಿ ರೂಪಾಯಿಗಳಿಗೂ ಅಧಿಕ ಮೌಲ್ಯದ ಹಲವು ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿ, ಶಿಲಾನ್ಯಾಸ ನೆರವೇರಿಸಿ, ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ. ಆಂಧ್ರಪ್ರದೇಶದ ಹಸಿರು ವಲಯದ ರಾಜಧಾನಿ ಅಮರಾವತಿಯಲ್ಲಿ ಪ್ರಧಾನಮಂತ್ರಿ ಪ್ರಮುಖ ಬಂಡವಾಳ ಸೌಲಭ್ಯಗಳ ನಿರ್ಮಾಣಕ್ಕೂ ಚಾಲನೆ ನೀಡಲಿದ್ದಾರೆ. ದೇಶಾದ್ಯಂತ

ವಿಶ್ವದರ್ಜೆಯ ಮೂಲಸೌಕರ್ಯ ಮತ್ತು ಸಂಪರ್ಕ ಖಾತ್ರಿಪಡಿಸಿಕೊಳ್ಳುವ ಸರ್ಕಾರದ ಬದ್ಧತೆಗೆ ಅನುಗುಣವಾಗಿ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಆಂಧ್ರಪ್ರದೇಶದಲ್ಲಿ ೭ ರಾಷ್ಟ್ರೀಯ ಹೆದ್ದಾರಿ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ ಮತ್ತು ೬ ರಾಷ್ಟ್ರೀಯ ಹೆದ್ದಾರಿ ಯೋಜನೆಗಳು ಮತ್ತು ಒಂದು ರೈಲ್ವೆ ಯೋಜನೆಗೆ ಶಿಲಾನ್ಯಾಸ ನೆರವೇರಿಸಲಿದ್ದಾರೆ. ಆಂಧ್ರಪ್ರದೇಶದ ರಾಜಧಾನಿ ಅಮರಾವತಿಯಲ್ಲಿ ೧೧,೨೪೦ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಶಾಸಕಾಂಗ ಸಭೆ, ಹೈಕೋರ್ಟ್, ಸಚಿವಾಲಯ ಮತ್ತು ಇತರ ಆಡಳಿತ ಕಟ್ಟಡಗಳಿಗೆ ಶಿಲಾನ್ಯಾಸ ನೆರವೇರಿಸಲಿದ್ದಾರೆ. ಈ ಕುರಿತು ಒಂದು ವರದಿ

ಧ್ವನಿ : ಸಾಯಿ ಸಿಸ್ಟಲಾ ಪಿಎಂ ಆಂಧ್ರ (೩೨ ಸೆಕೆಂಡ್‌ಗಳು)

*********

ವೇವ್ಸ್  ಶೃಂಗಸಭೆಯ ಭಾಗವಾಗಿ ಮೊದಲ ಬಾರಿಗೆ ಆಯೋಜಿಸಿರುವ ಜಾಗತಿಕ ಮಾಧ್ಯಮ ಸಂವಾದ ಆರಂಭವಾಗಿದೆ. ಈ ಸಂವಾದದಲ್ಲಿ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್, ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ. ಎಲ್. ಮುರುಗನ್ ಭಾಗವಹಿಸಲಿದ್ದಾರೆ. ಜಾಗತಿಕ ಮಾಧ್ಯಮ ಮತ್ತು ಮನರಂಜನಾ ವಲಯದಲ್ಲಿ ದೇಶವನ್ನು ತೊಡಗಿಸಿಕೊಳ್ಳುವಿಕೆಯಲ್ಲಿ ಈ ಕಾರ್ಯಕ್ರಮವು ಮಹತ್ವದ ಮೈಲಿಗಲ್ಲು ಎಂದು ಗುರುತಿಸಲಾಗಿದೆ. ನಿನ್ನೆ ಆರಂಭವಾದ ನಾಲ್ಕು ದಿನಗಳ ಶೃಂಗಸಭೆಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ ನೀಡಿದರು. ಏಷ್ಯಾ, ಯುರೋಪ್, ಆಫ್ರಿಕಾ ಮತ್ತು ಅಮೆರಿಕಾಗಳಾದ್ಯಂತದ ನಿಯೋಗಗಳೊಂದಿಗೆ ೬೦ಕ್ಕೂ ಅಧಿಕ ದೇಶಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿವೆ. ಅಂತಾರಾಷ್ಟ್ರೀಯ ಸಹಯೋಗವನ್ನು ಪ್ರೋತ್ಸಾಹಿಸುವುದು, ಉತ್ತಮ ಅಭ್ಯಾಸಗಳನ್ನು ಉತ್ತೇಜಿಸುವುದು ಮತ್ತು ಜಾಗತಿಕ ಮಾಧ್ಯಮ ಕ್ಷೇತ್ರದಲ್ಲಿ ನೀತಿ ಜೋಡಣೆ, ಪ್ರತಿಭಾ ವಿನಿಮಯ ಮತ್ತು ಸಾಮರ್ಥ್ಯ ವೃದ್ಧಿಗೆ ಮಾರ್ಗಗಳನ್ನು ಅನ್ವೇಷಿಸುವುದು ಈ ಸಂವಾದದ ಗುರಿಯಾಗಿದೆ.

*********

ಮನರಂಜನಾ ಉದ್ಯಮವನ್ನು ಇನ್ನಷ್ಟು ಬಲಪಡಿಸುವ ಸಾಮರ್ಥ್ಯವಿರುವ ವೇವ್ಸ್ ಶೃಂಗಸಭೆಯನ್ನು ರೂಪಿಸಿ, ಆಯೋಜಿಸಿದ್ದಕ್ಕಾಗಿ, ನಟ ಮತ್ತು ಚಲನಚಿತ್ರ ನಿರ್ಮಾಪಕ ಶಾರುಖ್ ಖಾನ್, ಪ್ರಧಾನಿ ನರೇಂದ್ರ ಮೋದಿ ಅವರಿಗೆ ಚಿತ್ರರಂಗದ ಪರವಾಗಿ ಕೃತಜ್ಞತೆ ಸಲ್ಲಿಸಿದ್ದಾರೆ. ಈ ವೇದಿಕೆಯು ಉದ್ಯಮಕ್ಕೆ ಎಷ್ಟು ಸೂಕ್ತವಾಗಿದೆ ಮತ್ತು ಸರ್ಕಾರದಿಂದ ವಿವಿಧ ಕ್ಷೇತ್ರಗಳಲ್ಲಿ ಅಗತ್ಯವಾದ ಸಹಕಾರ ಹಾಗೂ ಬೆಂಬಲವನ್ನು ಒದಗಿಸುತ್ತದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಧ್ವನಿ : ಶಾರುಖ್ ಖಾನ್ (೨೭ ಸೆಕೆಂಡ್‌ಗಳು)

*********

೨೦೨೪-೨೫ ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆ ಒಂದರ ಫಲಿತಾಂಶ ಇಂದು ಪ್ರಕಟಗೊಂಡಿದೆ. ಈ ಬಾರಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶಾಲಾ ವಿದ್ಯಾರ್ಥಿಗಳು, ಖಾಸಗಿ ಅಭ್ಯರ್ಥಿಗಳು, ಪುನರಾವರ್ತಿತ ಶಾಲಾ ಮತ್ತು ಖಾಸಗಿ ಅಭ್ಯರ್ಥಿಗಳು ಸೇರಿದಂತೆ ಒಟ್ಟಾರೆ ಶೇಕಡ ೬೨.೩೪ ರಷ್ಟು ಫಲಿತಾಂಶ ಬಂದಿದೆ. ಮೊದಲ ಬಾರಿ ಪರೀಕ್ಷೆ ಎದುರಿಸಿದ ಶಾಲಾ ವಿದ್ಯಾರ್ಥಿಗಳಲ್ಲಿ ಶೇಕಡ ೬೬.೧೪ ರಷ್ಟು ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಈ ಕುರಿತಂತೆ ಇಂದು ಸುದ್ದಿಗೋಷ್ಠಿ ನಡೆಸಿ ಶಿಕ್ಷಣ ಸಚಿವ ಮಧು ಬಂಗಾರಪ್ಪ ಸುದ್ದಿಗೋಷ್ಠಿ ನಡೆಸಿ ಫಲಿತಾಂಶದ ಮಾಹಿತಿ ನೀಡಿದರು. ರಾಜ್ಯಾದ್ಯಂತ ಮಾರ್ಚ್ ೨೧ ರಿಂದ ಎಪ್ರೀಲ್ ೪ರವರೆಗೆ ಒಟ್ಟು ೨ ಸಾವಿರದ ೮೧೮ ಪರೀಕ್ಷಾ ಕೇಂದ್ರಗಳಲ್ಲಿ ನಡೆಸಲಾದ ಪರೀಕ್ಷೆಗೆ ಒಟ್ಟು ೮ ಲಕ್ಷದ ೪೨ಸಾವಿರದ ೧೭೩ ಅಭ್ಯರ್ಥಿಗಳು ಹಾಜರಾಗಿದ್ದರು. ಈ ಬಾರಿ ಶೆಕಡಾ ೭೪ ರಷ್ಟು ಬಾಲಕಿಯರು ಉತ್ತೀರ್ಣ ರಾಗುವ ಮೂಲಕ ಮೇಲುಗೈ ಸಾಧಿಸಿದ್ದರೆ ಶೇಕಡಾ ೫೮.೦೭ ರಷ್ಟು ಬಾಲಕರು ಉತ್ತೀರ್ಣರಾಗಿದ್ದಾರೆ.ಒಟ್ಟು ೨೨ ವಿದ್ಯಾರ್ಥಿಗಳು ೬೨೫ ಕ್ಕೆ ೬೨೫ ಅಂಕ ಗಳಿಸಿದ್ದಾರೆ. ೬೫ ವಿದ್ಯಾರ್ಥಿಗಳು ೬೨೪, ೧೦೮ ವಿದ್ಯಾರ್ಥಿಗಳು ೬೨೩ ಅಂಕ ಗಳಿಸಿದ್ದಾರೆ. ಶೇಕಡಾ ೯೧.೧೨ ರಷ್ಟು ಫಲಿತಾಂಶದೊಂದಿಗೆ ದಕ್ಷಿಣ ಕನ್ನಡ ಜಿಲ್ಲೆ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿದ್ದು ೮೯.೯೬ ಫಲಿತಾಂಶದೊಂದಿಗೆ ಉಡುಪಿ ಹಾಗೂ ೮೩.೧೯ ಫಲಿತಾಂಶದೊಂದಿಗೆ ಉತ್ತರ ಕನ್ನಡ ಜಿಲ್ಲೆ ಕ್ರಮವಾಗಿ ೨ನೇ ಹಾಗೂ ೩ನೇ ಸ್ಥಾನದಲ್ಲಿದೆ. ಕಲಬುರ್ಗಿ ಜಿಲ್ಲೆ ೪೨.೪೩ರಷ್ಟು ಫಲಿತಾಂಶದೊಂದಿಗೆ ಕೊನೆ ಸ್ಥಾನದಲ್ಲಿದೆ.

*********

ವೇದ ಮಂತ್ರ ಘೋಷಗಳು ಹಾಗೂ ಧಾರ್ಮಿಕ ವಿಧಿವಿಧಾನಗಳೊಂದಿಗೆ ಉತ್ತರಾಖಂಡದ ರುದ್ರಪ್ರಯಾಗ್ ಜಿಲ್ಲೆಯಲ್ಲಿರುವ ಕೇದಾರನಾಥ ಧಾಮದ ದೇವಾಲಯವನ್ನು ಇಂದಿನಿಂದ ಭಕ್ತರಿಗಾಗಿ ತೆರೆಯಲಾಗಿದೆ. ದೇಶದ ನಾನಾ ಭಾಗಗಳಿಂದ ಬಂದಿರುವ ಸಹಸ್ರಾರು ಭಕ್ತರು ದರ್ಶನ ಪಡೆಯುತ್ತಿದ್ದಾರೆ. ಪವಿತ್ರ ಕಣಿವೆಯಲ್ಲಿ ಕೇದಾರನಾಥ ದೇವಾಲಯವನ್ನು ವಿಶೇಷ ಹೂವುಗಳಿಂದ ಅಲಂಕರಿಸಲಾಗಿದ್ದು, ಧಾರ್ಮಿಕ ಸಂಭ್ರಮ ಮನೆ ಮಾಡಿದೆ. ನಾನಾ ಬಗೆಯ ೧೦೮ ಕ್ವಿಂಟಾಲ್ ಹೂವುಗಳಿಂದ ದೇವಾಲಯವನ್ನು ಅಲಂಕರಿಸಲಾಗಿದ್ದು, ದೇವಾಲಯದ ಸುತ್ತ ಭಕ್ತರು ಸಂಭ್ರಮಿಸುತ್ತಿದ್ದಾರೆ. ಧಾರ್ಮಿಕ ಸಂಪ್ರದಾಯದಂತೆ ಕಳೆದ ೨೭ ರಂದು ಓಂಕಾರೇಶ್ವರ ದೇವಾಲಯದಿಂದ ಕೇದಾರನಾಥ ಮೂರ್ತಿಯನ್ನು ಪಂಚಮುಖಿ ಡೋಲಿಯಲ್ಲಿ ಹೊತ್ತು ಮೆರವಣಿಗೆ ಮೂಲಕ ತರಲಾಯಿತು. ಹರ ಹರ ಮಹದೇವ ಮಂತ್ರ ಪಠಣ ಹಾಗೂ ಭಕ್ತಿಗೀತೆಗಳೊಂದಿಗೆ ಹೂವಿನ ಮಳೆಗರಿದು ಮೂರ್ತಿಯನ್ನು ಸ್ವಾಗತಿಸಲಾಯಿತು. ಇಂದು ಬೆಳಗ್ಗೆ ದೇವಾಲಯದ ದ್ವಾರಗಳನ್ನು ತೆರೆಯಲಾಗಿದ್ದು, ಭಕ್ತರ ದರ್ಶನಕ್ಕೆ ಸಕಲ ವ್ಯವಸ್ಥೆಗಳನ್ನು ಕಲ್ಪಿಸಲಾಗಿದೆ.

ಧ್ವನಿ : ಸಂತೋಷ್ (ಬಾತ್ಮೀದಾರ) (೪೦ ಸೆಕೆಂಡ್‌ಗಳು)

*********

ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿ ಇಂದು ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಗುಜರಾತ್ ಟೈಟನ್ಸ್ ಮತ್ತು ಸನ್‌ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭:೩೦ ಕ್ಕೆ ಆರಂಭವಾಗಲಿದೆ. ನಿನ್ನೆ ರಾತ್ರಿ ಜೈಪುರದ ಸವಾಯ್ ಮಾನ್ಸಿಂಗ್ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡವು ೧೦೦ ರನ್‌ಗಳಿಂದ ಗೆಲುವು ಸಾಧಿಸಿದೆ. ಮುಂಬೈ ಇಂಡಿಯನ್ಸ್ ತಂಡವು ನೀಡಿದ್ದ ೨೧೮ ರನ್‌ಗಳ ಗುರಿಯನ್ನು ಬೆನ್ನಟ್ಟಿದ ರಾಜಸ್ಥಾನ್ ರಾಯಲ್ಸ್ ತಂಡ ೧೬.೧ ಓವರ್‌ಗಳಲ್ಲಿ ಕೇವಲ ೧೧೭ ರನ್‌ಗಳಿಗೆ ಆಲೌಟ್ ಆಗಿ ಸೋಲುಂಡಿತು.

******END******